**Akashvani : Bangalore**
**National Bulletin In Kannada**
**15.01.2025 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**15.01.2025 / 7.35 am**

**<><*<><>*><>**

ಮುಖ್ಯಾಂಶಗಳು

**೧. ಮುಂಬೈನಲ್ಲಿಂದು ಮೂರು ಮುಂಚೂಣಿ ಐಎನ್‌ಎಸ್ ಯುದ್ಧ ನೌಕೆಗಳನ್ನು ದೇಶಕ್ಕೆ ಸಮರ್ಪಿಸಲಿರುವ ಪ್ರಧಾನಿ ನರೇಂದ್ರ ಮೋದಿ**

**೨. ಸಿಂಗಾಪುರ ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ ಐದು ದಿನಗಳ ಭಾರತ ಭೇಟಿಗಾಗಿ ನವದೆಹಲಿಗೆ ಆಗಮನ**

**೩. ಮಾಡ್ರಿಡ್‌ನಲ್ಲಿ 'ಬದಲಾಗುತ್ತಿರುವ ಜಗತ್ತಿಗಾಗಿ ಕಾರ್ಯತಂತ್ರದ ಪಾಲುದಾರಿಕೆಗಳು' ಕಾರ್ಯಕ್ರಮದಲ್ಲಿ ಸಚಿವ ಡಾ.ಎಸ್.ಜೈಶಂಕರ್ ಭಾಗಿ**

**೪. ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್; ಮೂರನೇ ಪಂದ್ಯದಲ್ಲಿಂದು ಇಂದು ಭಾರತ - ಐರ್ಲೆಂಟ್ ಮುಖಾಮುಖಿ**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರಿಂದು ಮಹಾರಾಷ್ಟ್ರ ಪ್ರವಾಸ ಕೈಗೊಳ್ಳಲಿದ್ದು, ಮುಂಬೈನ ನೌಕಾನೆಲೆಯಲ್ಲಿ ಕಾರ್ಯಾರಂಭ ಮಾಡಲಿರುವ ಮುಂಚೂಣಿ ಯುದ್ಧ ನೌಕೆಗಳಾದ ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಜಲಾಂತರ್ಗಾಮಿ ಯುದ್ಧ ನೌಕೆ ಐಎನ್‌ಎಸ್ ವಾಘ್‌ಶೀರ್‌ಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

**ಈ ಕುರಿತು ಒಂದು ವರದಿ:**

ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಐಎನ್‌ಎಸ್ ವಾಘ್‌ಶೀರ್ ಯುದ್ಧ ನೌಕೆಗಳ ಕಾರ್ಯಾರಂಭ ರಕ್ಷಣಾ ಉತ್ಪಾದನೆ ಮತ್ತು ಕಡಲ ಭದ್ರತೆಯಲ್ಲಿ ಜಾಗತಿಕ ನಾಯಕನಾಗುವ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ. ಪಿ೧೫ಬಿ ಮಾರ್ಗದರ್ಶಿ ಕ್ಷಿಪಣಿ ವಿಧ್ವಂಸಕ ಯೋಜನೆಯ ನಾಲ್ಕನೇ ಮತ್ತು ಅಂತಿಮ ಹಡಗು ಐಎನ್‌ಎಸ್ ಸೂರತ್, ವಿಶ್ವದ ಅತಿದೊಡ್ಡ ಮತ್ತು ಅತ್ಯಾಧುನಿಕ ವಿಧ್ವಂಸಕ ನೌಕೆಗಳಲ್ಲಿ ಸ್ಥಾನ ಪಡೆದಿದೆ. ಪಿ೧೭ಎ ಸ್ಟೀಲ್ತ್ ಫ್ರಿಗೇಟ್ ಯೋಜನೆಯ ಮೊದಲ ಹಡಗು ಐಎನ್‌ಎಸ್ ನೀಲಗಿರಿಯನ್ನು ಭಾರತೀಯ ನೌಕಾಪಡೆಯ ಯುದ್ಧನೌಕೆ ವಿನ್ಯಾಸ ಸಂಸ್ಥೆ ವಿನ್ಯಾಸಗೊಳಿಸಿದ್ದು, ಸುಧಾರಿತ ವೈಶಿಷ್ಟ್ಯಗಳನ್ನು ಒಳಗೊಂಡಿದೆ, ಐಎನ್‌ಎಸ್ ವಾಘಶೀರ್ ಜಲಾಂತರ್ಗಾಮಿ ನಿರ್ಮಾಣದಲ್ಲಿ ಭಾರತದ ಬೆಳೆಯುತ್ತಿರುವ ಪರಿಣತಿಯನ್ನು ಪ್ರತಿನಿಧಿಸುತ್ತದೆ. ಭೇಟಿಯ ಸಮಯದಲ್ಲಿ ಪ್ರಧಾನಿ, ಮುಂಬೈನ ಖಾರ್ಘರ್‌ನಲ್ಲಿ ಇಸ್ಕಾನ್‌ನ ಶ್ರೀ ರಾಧಾ ಮದನ್ ಮೋಹನ್‌ಜೀ ದೇವಾಲಯವನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ಒಂಬತ್ತು ಎಕರೆ ಪ್ರದೇಶದಲ್ಲಿ ಹರಡಿರುವ ಈ ದೇವಾಲಯ ಹಲವು ದೇವತೆಗಳ ಮಂದಿರ, ವೇದ ಶಿಕ್ಷಣ ಕೇಂದ್ರ, ಪ್ರಸ್ತಾವಿತ ವಸ್ತುಸಂಗ್ರಹಾಲಯಗಳು ಮತ್ತು ಸಭಾಂಗಣವನ್ನು ಒಳಗೊಂಡಿದೆ.

<><*<><>*><>

ರಾಷ್ಟ್ರೀಯ ಅರಿಶಿನ ಮಂಡಳಿಯ ಸ್ಥಾಪನೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನ ಮಂತ್ರಿಗಳು ಮಂಡಳಿಯ ಸ್ಥಾಪನೆಯು ವಿಶೇಷವಾಗಿ ದೇಶದ ಶ್ರಮಶೀಲ ಅರಿಶಿನ ಬೆಳೆಯುವ ರೈತರಿಗೆ ಅಪಾರ ಸಂತಸದ ವಿಷಯವಾಗಿದೆ. ಈ ಮಂಡಳಿಯು ಅರಿಶಿನ ಉತ್ಪಾದನೆಯಲ್ಲಿ ನಾವೀನ್ಯತೆ, ಜಾಗತಿಕ ಪ್ರಚಾರ ಮತ್ತು ಮೌಲ್ಯವರ್ಧನೆಗೆ ಉತ್ತಮ ಅವಕಾಶಗಳನ್ನು ಖಚಿತಪಡಿಸುತ್ತದೆ ಎಂದು ಅವರು ಹೇಳಿದ್ದಾರೆ. ಇದು ಪೂರೈಕೆ ಸರಪಳಿಗಳನ್ನು ಬಲಪಡಿಸುವ ಜೊತೆಗೆ ರೈತರು ಮತ್ತು ಗ್ರಾಹಕರಿಗೆ ಪ್ರಯೋಜನ ನೀಡುತ್ತದೆ ಎಂದು ಪ್ರಧಾನಿ ತಿಳಿಸಿದ್ದಾರೆ.

<><*<><>*><>

ಸಿಂಗಾಪುರ ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ ಅವರು ಐದು ದಿನಗಳ ಭಾರತ ಭೇಟಿಗಾಗಿ ನವದೆಹಲಿಗೆ ಆಗಮಿಸಿದ್ದಾರೆ. ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ ನಿನ್ನೆ ರಾತ್ರಿ ಅವರನ್ನು ಸ್ವಾಗತಿಸಿದರು. ಅಧ್ಯಕ್ಷ ಥರ್ಮನ್ ಅವರೊಂದಿಗೆ ಸಚಿವರು, ಸಂಸತ್ ಸದಸ್ಯರು ಮತ್ತು ಅಧಿಕಾರಿಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗ ಭಾರತಕ್ಕೆ ಭೇಟಿ ನೀಡಿದೆ. ಸಿಂಗಾಪುರ ಅಧ್ಯಕ್ಷರಾಗಿ ಥರ್ಮನ್ ಷಣ್ಮುಗರತ್ನಂ ಅವರ ಮೊದಲ ಭಾರತ ಭೇಟಿ ಇದಾಗಿದೆ. ಇಂದು ಅಧ್ಯಕ್ಷ ಥರ್ಮನ್ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಚರ್ಚೆ ನಡೆಸಲಿದ್ದು, ಅವರ ಭೇಟಿಯ ಗೌರವಾರ್ಥ ಔತಣಕೂಟವನ್ನು ಆಯೋಜಿಸಲಾಗಿದೆ. ಬಳಿಕ ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಮತ್ತಿತರರು ಅಧ್ಯಕ್ಷ ಥರ್ಮನ್ ಅವರನ್ನು ಭೇಟಿ ಮಾಡಲಿದ್ದಾರೆ.

<><*<><>*><>

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಮತ್ತು ಸ್ಪೇನ್‌ನ ಸಹವರ್ತಿ ಜೋಸ್ ಮ್ಯಾನುಯೆಲ್ ಅಲ್ಬರೆಸ್ ಅವರು ಮ್ಯಾಡ್ರಿಡ್‌ನಲ್ಲಿ 'ಬದಲಾಗುತ್ತಿರುವ ಜಗತ್ತಿಗಾಗಿ ಕಾರ್ಯತಂತ್ರದ ಪಾಲುದಾರಿಕೆಗಳು' ಕುರಿತ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಸಚಿವ ಡಾ.ಎಸ್.ಜೈಶಂಕರ್, ಉಭಯ ರಾಷ್ಟ್ರಗಳ ಉದಯೋನ್ಮುಖ ಪ್ರತಿಭೆಗಳ ತರಬೇತಿಗೆ, ಜಾಗತಿಕ ಆರ್ಥಿಕತೆಯ ಬಲವರ್ಧನೆಗೆ ಭಾರತ-ಸ್ಪೇನ್ ಪಾಲುದಾರಿಕೆ ನಿರ್ಣಾಯಕ ಪಾತ್ರವಹಿಸುತ್ತದೆ. ಐರೋಪ್ಯ ಒಕ್ಕೂಟ, ಮೆಡಿಟೇರಿಯನ್ ರಾಷ್ಟ್ರಗಳು ಮತ್ತು ಲ್ಯಾಟಿನ್ ಅಮೆರಿಕಾದೊಂದಿಗೆ ಸಂಬಂಧಗಳ ಬಲವರ್ಧನೆಗೆ ಸ್ಪೇನ್ ಪ್ರಮುಖ ಪಾಲುದಾರ ರಾಷ್ಟ್ರ ಎಂದಿದ್ದಾರೆ. ಬಳಿಕ ಜೈಶಂಕರ್, ಸ್ಪೇನ್ ರಕ್ಷಣಾ ಸಚಿವೆ ಮಾರ್ಗರಿಟಾ ರೋಬಲ್ಸ್ ಅವರೊಂದಿಗೆ ರಕ್ಷಣಾ ವಲಯದ ಸಹಕಾರ ಬಲವರ್ಧನೆ ಮತ್ತು ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಕುರಿತು ಸಮಾಲೋಚನೆ ನಡೆಸಿದರು.

<><*<><>*><>

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಬೃಹತ್ ರೈಲ್ವೆ ಪುನರಾಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ ಎಂದು ಬಿಜೆಪಿ ನಾಯಕ ಮತ್ತು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ದೆಹಲಿಗೆ ರೈಲ್ವೆ ಬಜೆಟ್‌ನಲ್ಲಿ ಉತ್ತಮ ಹಂಚಿಕೆಯಾಗಿದೆ. ಹತ್ತು ವರ್ಷಗಳ ಹಿಂದೆ ೯೬ ಕೋಟಿ ರೂಪಾಯಿಗಳಿದ್ದ ಬಜೆಟ್ ಹಂಚಿಕೆ ಈಗ ೫೮೧ ಕೋಟಿ ರೂಪಾಯಿಗಳನ್ನು

ತಲುಪಿದೆ, ಇದು ಹಂಚಿಕೆಯಲ್ಲಿ ೨೭ ಪಟ್ಟು ಹೆಚ್ಚಳವನ್ನು ಸೂಚಿಸುತ್ತದೆ ಎಂದು ಅವರು ಹೇಳಿದರು. ದೆಹಲಿಯ ೧೩ ನಿಲ್ದಾಣಗಳಲ್ಲಿ ಪುನರಾಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಹೆಚ್ಚುತ್ತಿರುವ ಪ್ರಯಾಣಿಕರ ಸಂಖ್ಯೆಯನ್ನು ಪರಿಣಾಮಕಾರಿಯಾಗಿ ನಿಭಾಯಿಸಲು ರೈಲ್ವೆ ನಿಲ್ದಾಣಗಳಲ್ಲಿ ಸಾಮರ್ಥ್ಯ ವೃದ್ಧಿಯನ್ನು ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

**ಧ್ವನಿ: ಅಶ್ವಿನಿ ವೈಷ್ಣವ್**

**<><*<><>*><>**

ರಷ್ಯಾದಲ್ಲಿ ಭಾರತೀಯ ಪ್ರಜೆಯೊಬ್ಬರ ಸಾವಿನ ವಿಷಯವನ್ನು ಭಾರತ ಗಂಭೀರವಾಗಿ ಪರಿಗಣಿಸಿದ್ದು, ಈ ವಿಷಯ ಕುರಿತು ಮಾಸ್ಕೋದಲ್ಲಿರುವ ರಷ್ಯಾದ ಅಧಿಕಾರಿಗಳು ಮತ್ತು ನವದೆಹಲಿಯಲ್ಲಿರುವ ರಷ್ಯಾದ ರಾಯಭಾರ ಕಚೇರಿಯೊಂದಿಗೆ ಬಲವಾಗಿ ಚರ್ಚಿಸಿದೆ. ರಷ್ಯಾದ ಸೇನೆಯಲ್ಲಿ ಸೇವೆ ಸಲ್ಲಿಸಲು ನೇಮಕಗೊಂಡಿರುವ ಉಳಿದ ಭಾರತೀಯ ಪ್ರಜೆಗಳನ್ನು ಶೀಘ್ರವಾಗಿ ಬಿಡುಗಡೆ ಮಾಡಬೇಕೆಂಬ ಬೇಡಿಕೆಯನ್ನು ವಿದೇಶಾಂಗ ಸಚಿವಾಲಯ ಪುನರುಚ್ಚರಿಸಿದೆ. ಹೇಳಿಕೆಯೊಂದರಲ್ಲಿ ನಿನ್ನೆ ರಷ್ಯಾದ ಸೇನೆಯಲ್ಲಿ ಸೇವೆ ಸಲ್ಲಿಸಲು ನೇಮಕಗೊಂಡಿದ್ದ ಕೇರಳದ ಭಾರತೀಯ ಪ್ರಜೆಯ ಸಾವಿನ ಬಗ್ಗೆ ಸಚಿವಾಲಯ ಸಂತಾಪ ವ್ಯಕ್ತಪಡಿಸಿದೆ. ಕೇರಳದ ಮತ್ತೊಬ್ಬ ಭಾರತೀಯ ಪ್ರಜೆ ಗಾಯಗೊಂಡು ಮಾಸ್ಕೋದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಮಾಸ್ಕೋದಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಭಾರತೀಯ ಪ್ರಜೆಗಳ ಕುಟುಂಬಗಳೊಂದಿಗೆ ಸಂಪರ್ಕದಲ್ಲಿದ್ದು, ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸುತ್ತಿದೆ ಎಂದು ತಿಳಿಸಿದೆ. ಮೃತದೇಹವನ್ನು ಭಾರತಕ್ಕೆ ಶೀಘ್ರದಲ್ಲೇ ತರಲು ಮತ್ತು ಗಾಯಗೊಂಡ ವ್ಯಕ್ತಿಯನ್ನು ಶೀಘ್ರವಾಗಿ ಬಿಡುಗಡೆ ಮಾಡಿ ಭಾರತಕ್ಕೆ ವಾಪಸ್ ಕಳುಹಿಸಲು ಸಚಿವಾಲಯ ಕೋರಿದೆ.

**<><*<><>*><>**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋದ ನೂತನ ಅಧ್ಯಕ್ಷರಾಗಿ ಹಿರಿಯ ವಿಜ್ಞಾನಿ ಡಾ.ವಿ.ನಾರಾಯಣನ್ ನಿನ್ನೆ ಅಧಿಕಾರ ವಹಿಸಿಕೊಂಡರು. ಇದೇ ವೇಳೆ ಬಾಹ್ಯಾಕಾಶ ಆಯೋಗದ ಅಧ್ಯಕ್ಷ ಮತ್ತು ಬಾಹ್ಯಾಕಾಶ ಇಲಾಖೆಯ ಕಾರ್ಯದರ್ಶಿಯಾಗಿ ಸಹ ಜವಾಬ್ದಾರಿ ವಹಿಸಿಕೊಂಡರು. ಇಸ್ರೋದ ನಿರ್ಗಮಿತ ಅಧ್ಯಕ್ಷ ಡಾ. ಎಸ್. ಸೋಮನಾಥನ್ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ೧೯೮೪ರಲ್ಲಿ ಇಸ್ರೋಗೆ ಸೇರಿದ ನಾರಾಯಣನ್ ಅವರು ಕಳೆದ ನಾಲ್ಕು ದಶಕಗಳಿಂದ ಬಾಹ್ಯಾಕಾಶ ಯೋಜನೆಗಳಲ್ಲಿ ಗಣನೀಯ ಕೊಡುಗೆ ನೀಡಿದ್ದಾರೆ. ೨೦೧೮ರ ಜನವರಿಯಲ್ಲಿ ಇಸ್ರೋದ ಲಿಕ್ವಿಡ್ ಪ್ರೊಪಲ್ಷನ್ ಸಿಸ್ಟಮ್ ಸೆಂಟರ್ ನಿರ್ದೇಶಕರಾಗಿ ನೇಮಕಗೊಂಡಿದ್ದರು. ಇದಕ್ಕೂ ಮುನ್ನ ಹಲವು ಮಹತ್ವದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿರುವ ಕೀರ್ತಿ ಇವರದ್ದಾಗಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನಡೆಸುತ್ತಿರುವ 'ಪರೀಕ್ಷಾ ಪೇ ಚರ್ಚಾ'ದಲ್ಲಿ ಭಾಗವಹಿಸಲು ದಾಖಲೆಯ ೩.೨೫ ಕೋಟಿ ವಿದ್ಯಾರ್ಥಿಗಳು, ಪೋಷಕರು ಮತ್ತು ಶಿಕ್ಷಕರು ಈ ಬಾರಿ ನೋಂದಾಯಿಸಿಕೊಂಡಿದ್ದಾರೆ ಎಂದು ಕೇಂದ್ರ ಶಿಕ್ಷಣ ಸಚಿವಾಲಯ ತಿಳಿಸಿದೆ.

**<><*<><>*><>**

ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿರುವ ಉತ್ತಮ ಆಡಳಿತ, ಹತ್ತು ಮೂಲಭೂತ ತತ್ವಗಳನ್ನು ಆಧರಿಸಿದೆ ಎಂದು ಕೇಂದ್ರ ವಾಣಿಜ್ಯ ಸಚಿವ ಮತ್ತು ಹಿರಿಯ ಬಿಜೆಪಿ ನಾಯಕ ಪಿಯೂಷ್ ಗೋಯಲ್ ಹೇಳಿದ್ದಾರೆ. ಚೆನ್ನೈನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ, ನಿರ್ಣಾಯಕ ನಾಯಕತ್ವ, ಫಲಿತಾಂಶ ಆಧಾರಿತ ಕ್ರಮ, ಕಾನೂನು ಪಾಲನೆ ಮತ್ತು ಪಾರದರ್ಶಕತೆ, ಸಮಸ್ಯೆಗಳ ಆದ್ಯತೆ, ಹೊಣೆಗಾರಿಕೆ ಮತ್ತು ಮೇಲ್ವಿಚಾರಣೆ, ತಂತ್ರಜ್ಞಾನದ ಅಳವಡಿಕೆ, ನವೀನ ಹಣಕಾಸು ಮತ್ತು ಎಲ್ಲಾ ಪಾಲುದಾರರೊಂದಿಗೆ ಸಹಭಾಗಿತ್ವದಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದ್ದಾರೆ.

**<><*<><>*><>**

೨೦೨೫ರ ಗಣರಾಜ್ಯೋತ್ಸವ ಆಚರಣೆ ಪ್ರಯುಕ್ತ ಇದೇ ೨೩ ರಂದು ಕರ್ತವ್ಯ ಪಥದಲ್ಲಿ ನಡೆಯಲಿರುವ ಪೆರೇಡ್‌ನ ಫುಲ್ ಡ್ರೆಸ್ ರಿಹರ್ಸಲ್ ಅನ್ನು ವೀಕ್ಷಿಸಲು ಪಾಸ್‌ಗಳನ್ನು ವಿತರಿಸಲಾಗುತ್ತಿದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

**<><*<><>*><>**

ಪಂಜಾಬ್, ಹರಿಯಾಣ, ಚಂಡೀಗಢ, ದೆಹಲಿ ಮತ್ತು ಪಶ್ಚಿಮ ಉತ್ತರ ಪ್ರದೇಶದ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<><>*><>**

ಗುಜರಾತ್‌ನ ರಾಜ್‌ಕೋಟ್‌ನಲ್ಲಿ ನಡೆಯುತ್ತಿರುವ ಮೂರು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ಮೂರನೇ ಹಾಗೂ ಅಂತಿಮ ಪಂದ್ಯದಲ್ಲಿಂದು ಭಾರತ ಹಾಗೂ ಐರ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಬೆಳಗ್ಗೆ ೧೧ ಗಂಟೆಗೆ ಆರಂಭವಾಗಲಿದೆ. ಆಡಿರುವ ಎರಡು ಪಂದ್ಯಗಳನ್ನು ಗೆದ್ದು ಸರಣಿ ವಶಪಡಿಸಿಕೊಂಡಿರುವ ಭಾರತ, ಈ ಪಂದ್ಯವನ್ನು ಗೆದ್ದು, ವೈಟ್‌ವಾಶ್ ಸಾಧಿಸುವ ಹುಮ್ಮಸ್ಸಿನೊಂದಿಗೆ ಕಣಕ್ಕಿಳಿಯುತ್ತಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ**